ರೂ. 28.46 ಲಕ್ಷ ಮತ್ತು ರೂ. 21.98 ಲಕ್ಷಗಳನ್ನು ಮರು ಪಾವತಿಸಲಾಗಿದೆ. ಸರ್ಕಾರಕ್ಕೆ ಪಾವತಿಸಬೇಕಾದ ಸಾಲ ಮತ್ತು ಬಡ್ಡಿ ಬಾಬ್ತು 2004–05, 2005–06 ಮತ್ತು 2006–07ನೇ ಸಾಲುಗಳಲ್ಲಿ ಮರುಪಾವತಿ ಮಾಡಿರುವುದಿಲ್ಲ.

ಆ) ಈ ಮಹಾಮಂಡಳಿಯಿಂದ 31–03–2006ರ ಅಂತ್ಯಕ್ಕೆ ಸರ್ಕಾರಕ್ಕೆ ರೂ. 54.32 ಲಕ್ಷ ಸಾಲ ಮತ್ತು ರೂ. 159.23 ಲಕ್ಷ ಬಡ್ಡಿ ಮತ್ತು ದಂಡನಾ ಬಡ್ಡಿ ಒಟ್ಟು 213.55 ಲಕ್ಷಗಳು ಪಾವತಿಸಲು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೇ .

ಇ) ಸರ್ಕಾರಕ್ಕೆ ಪಾವತಿಸಲು ಬಾಕಿ ಇರುವ ಸಾಲ ಮತ್ತು ಬಡ್ಡಿಯನ್ನು ಪಾವತಿಸುವಂತೆ ಮಹಾಮಂಡಳಿಗೆ ಸೂಚಿಸಲಾಗಿದೆ.

119 (252) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ಸರ್ಕಾರದಿಂದ ಅರ್ಹ ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಚೀಟಿ ವಿತರಿಸಿ 6 ತಿಂಗಳು ಕಳೆದರೂ ಈವರೆಗೆ ನೀಡಿದ ತಾತ್ಕಾಲಿಕ ಪಡಿತರ ಚೀಟಿಯಲ್ಲಿರುವ ಕುಂದು ಕೊರತೆಗಳನ್ನು ಸರಿಪಡಿಸಿ ಖಾಯಂ ಪಡಿತರ ಚೀಟಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಖಾಯಂ ಪಡಿತರ ಚೀಟಿಯನ್ನು ಯಾವಾಗ – ವಿತರಣೆ ಮಾಡಲಾಗುವುದು ;

ಇ) ಬಡತನ ರೇಖೆಯಿಂದ ಮೇಲಿರುವ ನಾಗರೀಕರ ಪಡಿತರ ಚೀಟಿಗೆ ಹಿಂದೆ ನೀಡಲಾಗುತ್ತಿದ್ದ ಸೀಮೆಎಣ್ಣೆ ಸೌಲಭ್ಯವನ್ನು ರದ್ದುಪಡಿಸಿದ್ದರಿಂದ ರಾತ್ರಿ ವೇಳೆಯಲ್ಲಿ ವಿದ್ಯುತ್ ಕಡಿತ ಹಾಗೂ ಇತರೆ ಕಾರಣಗಳಿಂದ ರಾತ್ರಿ ವೇಳೆ ವಿದ್ಯುತ್ ಇಲ್ಲದೇ ಇದ್ದಾಗ ಇಂತಹವರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ ;

ಈ) ಇಂತಹವರಿಗೆ ಕನಿಷ್ಟ 3 ಲೀಟರ್ ಸೀಮೆಎಣ್ಣೆ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು) ?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಹೌದು.

ಆ) ಲೋಪದೋಷಗಳ ಬಗ್ಗೆ ಸಾರ್ವಜನಿಕರಿಂದ ಸ್ವೀಕರಿಸಿರುವ ಅಹವಾಲುಗಳನ್ನು ಪೂರ್ಣಪ್ರಮಾಣದಲ್ಲಿ ವಿಲೇವಾರಿಗೊಳಿಸಿ, ಖಾಯಂ ಪಡಿತರ ಚೀಟಿ ವಿತರಣೆಗೆ ಕ್ರಮ ವಹಿಸಲಾಗುವುದು. ಇದಕ್ಕೆ 6 ತಿಂಗಳ ಕಾಲಾವಕಾಶದಲ್ಲಿ ಕ್ರಮವಹಿಸಲಾಗುವುದು.

ಇ) ಅಡುಗೆ ಅನಿಲ ಸಂಪರ್ಕ ಹೊಂದಿರದ ಎಲ್ಲಾ ವರ್ಗದ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ.

ಈ) ಅನಿಲ ಸಂಪರ್ಕ ಹೊಂದಿದವರಿಗೆ ಸೀಮೆಎಣ್ಣೆ ವಿತರಿಸಲು ಸಾಧ್ಯವಾಗುವುದಿಲ್ಲ.

120 (253) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ಸರ್ಕಾರದ ಅನ್ನಪೂರ್ಣ ಯೋಜನೆಯಲ್ಲಿ ಕಡುಬಡವರಿಗೆ 10 ಕೆಜಿ ಅಕ್ಕಿ ಧರ್ಮಾಥೇ ನೀಡಲಾಗುತ್ತಿದ್ದ ಈ ಯೋಜನೆಯನ್ನು ಈಗ ಕೈಬಿಡಲಾಗಿರುವುದು ನಿಜವೇ ;

ಆ) ಇಂತಹ ಜನಹಿತ ಕಾರ್ಯಕ್ರಮ ನಿಲ್ಲಿಸಲು ಕಾರಣವೇನು ;

ಇ) ಈ ಯೋಜನೆಯನ್ನು ಪುನಃ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಇಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ನಪೂರ್ಣ ಯೋಜನೆಯಡಿ 25,452 ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ. ಈ ಎಲ್ಲಾ ಫಲಾನುಭವಿಗಳಿಗೆ 10 ಕೆಜಿ ಅಕ್ಕಿ ಉಚಿತವಾಗಿ ನೀಡಲಾಗುವುದು. ಇದಕ್ಕೆ ಸಂಬಂಧಿಸಿದಂತೆ ಆಡಳಿತಾತ್ಮಕ ವೆಚ್ಚವನ್ನು ಭರಿಸಲು ಸರ್ಕಾರಿ ಆದೇಶ ಸಂಖ್ಯೆ: ಕಂಇ 16 ಎಂಎಸ್‌ಟಿ 2006(1), ದಿನಾಂಕ: 25.1.2007 ರನ್ವಯ ರೂ. 77.51 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.